**Akashvani : Bangalore**
**National Bulletin In Kannada**
**19.06.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><*<><>*><>

<u>ಮುಖ್ಯಾಂಶಗಳು</u>

೧. ಭಾರತವನ್ನು ವಿಶ್ವದ ೩ನೇ ಅತಿದೊಡ್ಡ ಆರ್ಥಿಕತೆಯ ದೇಶವಾಗಿ ರೂಪಿಸುವಲ್ಲಿ ಕೃಷಿ ವಲಯ ಬಹುದೊಡ್ಡ ಪಾತ್ರ: ಪ್ರಧಾನಿ ನರೇಂದ್ರ ಮೋದಿ

೨. ಇಂಧನ ಕ್ಷೇತ್ರದಲ್ಲಿ ಆತ್ಮನಿರ್ಭರದ ಪ್ರತೀಕ ಸೂರ್ಯ ಘರ್" ಯೋಜನೆ; ದೇಶಾದ್ಯಂತ ೧ ಕೋಟಿ ಗ್ರಾಹಕರಿಗೆ ೩೦೦ ಯೂನಿಟ್ ಉಚಿತ ವಿದ್ಯುತ್ ಪಡೆಯುವ ಅವಕಾಶ

೩. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಾಯ್‌ನಾಡು ಸಂಸದೀಯ ಕ್ಷೇತ್ರಕ್ಕೆ ರಾಜೀನಾಮೆ ಸಲ್ಲಿಕೆ; ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅಂಗೀಕಾರ

೪. ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್: ಭಾರತದ ಜಾವೆಲಿನ್ ಪಟು ನೀರಜ್ ಛೋಪ್ರಾಗೆ ಚಿನ್ನದ ಪದಕ

೫. ವಿಶ್ವಕಪ್ ಟಿ-೨೦ ಕ್ರಿಕೆಟ್: ಇಂದಿನಿಂದ ಸೂಪರ್-೮ರ ಸುತ್ತು ಆರಂಭ; ಮೊದಲ ಪಂದ್ಯದಲ್ಲಿಂದು ದಕ್ಷಿಣ ಆಫ್ರಿಕಾ-ಅಮೆರಿಕ ಮುಖಾಮುಖಿ

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೯ ಕೋಟಿ ೨೬ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣವನ್ನು ವರ್ಗಾವಣೆ ಮಾಡಿದರು. ಉತ್ತರ ಪ್ರದೇಶದ ವಾರಾಣಸಿಯಲ್ಲಿ ನಿನ್ನೆ ಸಂಜೆ ನಡೆದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಸಮ್ಮೇಳನದಲ್ಲಿ ಅವರು ರೈತರ ಖಾತೆಗಳಿಗೆ ನೇರವಾಗಿ ಹಣ ವರ್ಗಾವಣೆ ಮಾಡುವ ಕಾರ್ಯಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಪ್ರಧಾನಿ, ಲೋಕಸಭೆ ಚುನಾವಣೆಯಲ್ಲಿ ನೀವು ನನ್ನನ್ನು ಮೂರನೇ ಬಾರಿಗೆ ಸಂಸದನಾಗಿ ಮಾತ್ರವಲ್ಲ, ಮೂರನೇ ಬಾರಿಗೆ ದೇಶದ ಪ್ರಧಾನಿಯಾಗಿ ಆಯ್ಕೆ ಮಾಡಿದ್ದೀರಿ. ನಿಮಗೆ ನನ್ನ ಧನ್ಯವಾದಗಳು ಎಂದು ಹೇಳಿದರು. ಭಾರತವನ್ನು ವಿಶ್ವದ ಮೂರನೇ ಆರ್ಥಿಕ ಶಕ್ತಿಯಾಗಿ ರೂಪಿಸಲು ದೇಶದ ಪರಂಪರಾಗತ ಕೃಷಿ ವಲಯ ಬಹು ದೊಡ್ಡ ಪಾತ್ರ ನಿರ್ವಹಿಸಲಿದೆ. "ಸರಿಯಾದ ಗುರಿ ಹಾಗೂ ಉದ್ದೇಶದೊಂದಿಗೆ ಕೆಲಸ ಮಾಡಿದರೆ ರೈತ ಕಲ್ಯಾಣ ಕಾರ್ಯಗಳು ತ್ವರಿತಗತಿಯಲ್ಲಿ ಸಾಗುತ್ತವೆ. ಜಾಗತಿಕ ಮಾರುಕಟ್ಟೆ ದೃಷ್ಟಿಯಲ್ಲಿಟ್ಟುಕೊಂಡು ಕೃಷಿ ಮಾಡಬೇಕು. ರಫ್ತು ಉತ್ಪಾದನೆ ಹೆಚ್ಚಿಸಬೇಕು," ಎಂದು ಪ್ರಧಾನಿ ಸಲಹೆ ನೀಡಿದರು. ಇದೇ ವೇಳೆ ನರೇಂದ್ರ ಮೋದಿ ಅವರು, ೩೦,೦೦೦ಕ್ಕೂ ಹೆಚ್ಚು ಮಹಿಳೆಯರಿಗೆ ಸ್ವಸಹಾಯ ಗುಂಪುಗಳ ಕೃಷಿ ಸಖಿಗಳ ಪ್ರಮಾಣಪತ್ರಗಳನ್ನು ಸಹ ವಿತರಿಸಿದರು. ಕೃಷಿ ಸಖಿ ಕನ್ವರ್ಜೆನ್ಸ್ ಕಾರ್ಯಕ್ರಮವು ಗ್ರಾಮೀಣ ಮಹಿಳೆಯರನ್ನು ಸಬಲೀಕರಣಗೊಳಿಸುವ ಮೂಲಕ ಗ್ರಾಮೀಣ ಭಾರತವನ್ನು ಪರಿವರ್ತಿಸುವ ಗುರಿಯನ್ನು ಹೊಂದಿದೆ.

ಉತ್ತರಪ್ರದೇಶ ರಾಜ್ಯಪಾಲರಾದ ಆನಂದಿಬೆನ್ ಪಟೇಲ್, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಉಪಸ್ಥಿತರಿದ್ದರು. ಈ ಕಾರ್ಯಕ್ರಮದ ಬಳಿಕ ಪ್ರಧಾನಿ ಅವರು, ವಾರಾಣಸಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಕ್ರೀಡಾಂಗಣ ಮತ್ತು ಕ್ರೀಡಾ ಸಂಕೀರಣದ ಕಾಮಗಾರಿಯನ್ನು ಪರಿಶೀಲಿಸಿದರು. ವಾರಾಣಸಿ ಕ್ಷೇತ್ರದಿಂದ ಸತತ ಮೂರನೇ ಬಾರಿಗೆ ಲೋಕಸಭೆಗೆ ಪ್ರಧಾನಿ ನರೇಂದ್ರ ಮೋದಿ ಆಯ್ಕೆಯಾಗಿದ್ದಾರೆ. ಇನ್ನೊಂದೆಡೆ, ಪ್ರಧಾನಿ ಮೋದಿಯವರು ವಾರಾಣಸಿಯ ದಶಾಶ್ವಮೇಧ ಘಾಟ್‌ನಲ್ಲಿ ಗಂಗಾ ಆರತಿ ವೀಕ್ಷಿಸಿದ್ದು, ನಂತರ ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆಯಲ್ಲಿ ಪಾಲ್ಗೊಂಡರು.

<><*<><>*><>

ಪ್ರಧಾನಿ ನರೇಂದ್ರ ಮೋದಿ, ಇಂದು ಬೆಳಗ್ಗೆ ಬಿಹಾರಕ್ಕೆ ಭೇಟಿ ನೀಡಲಿದ್ದು, ನಳಂದ ಜಿಲ್ಲೆಯ ರಾಜ್‌ಗಿರ್‌ನಲ್ಲಿರುವ ನಳಂದ ವಿಶ್ವವಿದ್ಯಾಲಯದ ನೂತನ್ ಕ್ಯಾಂಪಸ್ ಅನ್ನು ಉದ್ಘಾಟಿಸಲಿದ್ದಾರೆ. ವಿಶ್ವವಿದ್ಯಾಲಯವನ್ನು ಭಾರತ ಮತ್ತು ಪೂರ್ವ ಏಷ್ಯಾ ಶೃಂಗಸಭೆ ದೇಶಗಳ ನಡುವಿನ ಜಂಟಿ ಸಹಯೋಗದಲ್ಲಿ ರೂಪಿಸಲಾಗಿದ್ದು, ಉದ್ಘಾಟನಾ ಸಮಾರಂಭದಲ್ಲಿ ೧೭ ದೇಶಗಳ ಮುಖ್ಯಸ್ಥರು ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ. ಸುಮಾರು ೪೫೦ ಎಕರೆಯಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ವಿಶ್ವವಿದ್ಯಾಲಯದ ಕ್ಯಾಂಪಸ್ ನಿರ್ಮಾಣಗೊಂಡಿದೆ.

<><*<><>*><>

ಜಮ್ಮು-ಕಾಶ್ಮೀರದ ಶ್ರೀನಗರದಲ್ಲಿ ಇದೇ ೨೧ ರಂದು ನಡೆಯುವ ೧೦ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಪಾಲ್ಗೊಳ್ಳಲಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಕೇಂದ್ರ ಆಯುಷ್ ಸಚಿವ ಪ್ರತಾಪ್‌ರಾವ್ ಜಾದವ್, ಸ್ವಂತಕ್ಕಾಗಿ ಹಾಗೂ ಸಮಾಜಕ್ಕಾಗಿ ಯೋಗ" ಎಂಬ ಧ್ಯೇಯ ವಾಕ್ಯದಡಿ ಈ ವರ್ಷದ ಅಂತಾರಾಷ್ಟ್ರೀಯ ಯೋಗ ದಿನ ಆಚರಿಸಲಾಗುತ್ತಿದೆ. ವೈಯಕ್ತಿಕ ಮತ್ತು ಸಾಮಾಜಿಕ ಯೋಗಕ್ಷೇಮವನ್ನು ಬೆಳೆಸುವಲ್ಲಿ ಯೋಗ ಪ್ರಮುಖ ಪಾತ್ರ ವಹಿಸುತ್ತಿದೆ. ಯೋಗವು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಬೆಳವಣಿಗೆಯ ಜೊತೆಗೆ ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುತ್ತದೆ ಎಂದು ಹೇಳಿದರು. ಇತ್ತೀಚಿನ ವರ್ಷಗಳಲ್ಲಿ ಲಕ್ಷಾಂತರ ಜನರು, ಉತ್ಸಾಹದಿಂದ ಯೋಗದಲ್ಲಿ ನಿರತರಾಗುತ್ತಿರುವುದು ಸಮುದಾಯಗಳ ಮೇಲೆ ಯೋಗದ ಆಳವಾದ ಪ್ರಭಾವವನ್ನು ಪ್ರತಿಬಿಂಬಿಸುತ್ತದೆ ಎಂದರು. ಇದೇ ವೇಳೆ ಸಚಿವರು, ಬ್ರೈಲ್ ಲಿಪಿಯಲ್ಲಿ ಯೋಗ ಮಾರ್ಗಸೂಚಿ ಪುಸ್ತಕ ಬಿಡುಗಡೆಗೊಳಿಸಿದರು. ದೃಷ್ಟಿ ವಿಶೇಷಚೇತನರು ಯೋಗ ಕಲಿಯಲು ಮತ್ತು ಅಭ್ಯಾಸ ಮಾಡಲು ಈ ಪುಸ್ತಕ ಸಹಕಾರಿಯಾಗಿದೆ.

<><*<><>*><>

ಇಂಧನ ಕ್ಷೇತ್ರದಲ್ಲಿ ಆತ್ಮನಿರ್ಭರ ಹೊಂದುವುದು ಪ್ರಧಾನಿ ನರೇಂದ್ರ ಮೋದಿ ಅವರ ಆಶಯವಾಗಿದ್ದು, ಸೂರ್ಯ ಘರ್ ಯೋಜನೆ ಇದಕ್ಕೆ ಪ್ರತೀಕವಾಗಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹೇಳಿದರು. ನವದೆಹಲಿಯಲ್ಲಿ ನಿನ್ನೆ ಪ್ರಧಾನಮಂತ್ರಿ ಸೂರ್ಯ ಘರ್ ಯೋಜನೆ ಕಾರ್ಯದರ್ಶಿ ಮತ್ತು ಹಿರಿಯ ಅಧಿಕಾರಿಗಳೊಂದಿಗೆ ಸಮಗ್ರ ಪರಿಶೀಲನೆ ಸಭೆ ಉದ್ದೇಶಿಸಿ ಮಾತನಾಡಿದ ಸಚಿವರು, ಈ ನೂತನ ಸೂರ್ಯ ಘರ್ ಯೋಜನೆಯಡಿ ದೇಶಾದ್ಯಂತ ೧ ಕೋಟಿ ಗ್ರಾಹಕರು ೩೦೦ ಯೂನಿಟ್ ಉಚಿತ ವಿದ್ಯುತ್ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು.

ದೇಶದ ನಾನಾ ರಾಜ್ಯಗಳು, ವಿತರಕ ಘಟಕಗಳು ಮತ್ತು ನಾಗರಿಕರು ಈ ಯೋಜನೆಯ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ಈ ಮಹತ್ವದ ಸಭೆಯಲ್ಲಿ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದ ಸಚಿವ ಪ್ರಲ್ಹಾದ್ ಜೋಶಿ, ಸೂರ್ಯ ಘರ್ ಮೂಲಕ ಇಂಧನ ಕ್ಷೇತ್ರದಲ್ಲಿ ಆತ್ಮನಿರ್ಭರ ಸಾಧಿಸುವುದು ಭಾರತದ ಆಶಯವಾಗಿದೆ. ಇದು ಹಸಿರು ಹಾಗೂ ಹೆಚ್ಚು ಸುಸ್ಥಿರ ಭವಿಷ್ಯಕ್ಕೆ ಸುಗಮ ದಾರಿಯಾಗಲಿದೆ ಎಂದು ಅಭಿಪ್ರಾಯಿಸಿದರು.

<><*<><>*><>

ಕಾಂಗ್ರೆಸ್ ನಾಯಕ ಹಾಗೂ ಸಂಸದ ರಾಹುಲ್ ಗಾಂಧಿ, ಕೇರಳದ ವಾಯ್‌ನಾಡ್ ಸಂಸದೀಯ ಕ್ಷೇತ್ರಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರು, ಈ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ.  ಲೋಕಸಭಾ ಚುನಾವಣೆಯಲ್ಲಿ ರಾಹುಲ್ ಗಾಂಧಿ, ರಾಯ್‌ಬರೇಲಿ ಮತ್ತು ವಾಯ್‌ನಾಡ್ ಕ್ಷೇತ್ರಗಳಿಂದ ಸ್ಪರ್ಧಿಸಿ ಎರಡರಲ್ಲೂ ಗೆಲುವು ಸಾಧಿಸಿದ್ದರು. ಇದೀಗ ರಾಯ್‌ಬರೇಲಿ ಕ್ಷೇತ್ರ ಉಳಿಸಿಕೊಂಡು, ವಾಯ್‌ನಾಡ್ ಕ್ಷೇತ್ರಕ್ಕೆ ಅವರು ರಾಜೀನಾಮೆ ಸಲ್ಲಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರ ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮ, ಇದೇ ತಿಂಗಳ ೩೦ ರಂದು, ೧೧೧ನೇ ಸಂಚಿಕೆ ಪ್ರಸಾರವಾಗಲಿದೆ. ಪ್ರಧಾನಿ ಅವರು ದೇಶ, ವಿದೇಶಗಳ ಜನತೆಯೊಂದಿಗೆ, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಸತತ ಮೂರನೇ ಅವಧಿಗೆ ಪ್ರಧಾನಿಯಾಗಿ, ನರೇಂದ್ರ  ಮೋದಿ ಅವರು ಆಯ್ಕೆಯಾದ ನಂತರ, ಪ್ರಸಾರವಾಗಲಿರುವ ಮೊದಲ ಮನ್ ಕಿ ಬಾತ್ ಸಂಚಿಕೆ ಇದಾಗಿದೆ.  ಸಾರ್ವಜನಿಕರು ಟೋಲ್‌ಫ್ರೀ ಸಂಖ್ಯೆ ೧೮೦೦-೧೧-೭೮೦೦ ಗೆ ಅಥವಾ ನಮೋ ಆಪ್ ಅಥವಾ ಮೈ ಜಿ.ಒ.ವಿ ಡಾಟ್ ಇನ್ ಮೂಲಕ, ಇದೇ ೨೮ ರವರೆಗೆ ತಮ್ಮ ಅನಿಸಿಕೆಗಳನ್ನು, ಸಲಹೆ ಸೂಚನೆಗಳನ್ನು ಹಂಚಿಕೊಳ್ಳಬಹುದು.

<><*<><>*><>

೧೮ನೇ ಮುಂಬೈ ಅಂತರಾಷ್ಟ್ರೀಯ ಚಲನಚಿತ್ರೋತ್ಸವದ ಅಂಗವಾಗಿ ಸಾಕ್ಷ್ಯಚಿತ್ರ, ಕಿರು ಕಾದಂಬರಿ ಮತ್ತು ಅನಿಮೇಷನ್ ಚಲನಚಿತ್ರಗಳು ಪ್ರದರ್ಶನಗೊಳ್ಳುತ್ತಿವೆ. ಇಂದು ಬೆಳಗಿನ ಅವಧಿಯಲ್ಲಿ, ಐದು ರಾಷ್ಟ್ರೀಯ ಸ್ಪರ್ಧಾತ್ಮಕ ಚಲನಚಿತ್ರಗಳಾದ ಮೆಮೊರಿ ಫೂಟ್ ಪ್ರಿಂಟ್ಸ್, ವಿಲ್ ವಿತ್ ವಿಂಗ್ಸ್, ಮೈ ಥಾನ್ಸ್ ದಾರ್ ನಹಿ, ಗಾಂಧಿ ಬಾತ್, ಇಂಡಿಯಾ ಹೋಪ್ಸ್ ೨೪ ಮತ್ತು ಎರಡು ಅಂತರಾಷ್ಟ್ರೀಯ ಚಲನಚಿತ್ರಗಳಾದ ವಿಘ್ನೇಶ್ ಕುಮುಲೈ, ಅಗೇನ್‌ಸ್ಟ್ ದಿ ಟೈಡ್ ಅನ್ನು  ಪ್ರದರ್ಶಿಸಲಾಗುತ್ತದೆ. ಮುಂಬೈ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಂದರ್ಭದಲ್ಲಿ ಸಿಎಸ್‌ಆರ್ ಉಪಕ್ರಮಗಳನ್ನು ಉತ್ತೇಜಿಸಲು ಸಾಕ್ಷ್ಯಚಿತ್ರಗಳನ್ನು ಸದುಪಯೋಗ ಪಡಿಸಿಕೊಳ್ಳುವ ಕುರಿತು ಚರ್ಚೆಗಳು ನಡೆಯಲಿವೆ. ೬ ದಿನಗಳ ಈ ಚಲನಚಿತ್ರೋತ್ಸವ ಇದೇ ೨೧ ರಂದು ಕೊನೆಗೊಳ್ಳಲಿದೆ.

<><*<><>*><>

ಫಿನ್‌ಲ್ಯಾಂಡ್‌ನ ಟುರ್ಕುನಲ್ಲಿ ನಡೆದ ವಿಶ್ವ ಅಥ್ಲೆಟಿಕ್ಸ್ ಕಾಂಟಿನೆಂಟಲ್ ಗೋಲ್ಡ್ ಸ್ಪರ್ಧೆಯಲ್ಲಿ ಭಾರತದ ಒಲಿಂಪಿಕ್ಸ್ ಹಾಗೂ ವಿಶ್ವ ಚಾಂಪಿಯನ್ ನೀರಜ್ ಚೋಪ್ರಾ, ಪುರುಷರ ಜಾವೆಲಿನ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದುಕೊಂಡಿದ್ದಾರೆ. ಪಾವೊ ನುರ್ಮಿ ಕ್ರೀಡಾಂಗಣದಲ್ಲಿ ರಾತ್ರಿ ನಡೆದ ಫೈನಲ್‌ನಲ್ಲಿ ನೀರಜ್ ಚೋಪ್ರಾ, ೮೫.೯೭ ಮೀಟರ್ ದೂರ ಜಾವೆಲಿನ ಎಸೆಯುವ ಮೂಲಕ ಚಿನ್ನದ ಪದಕ ತಮ್ಮದಾಗಿಸಿಕೊಂಡರು.

ಒಟ್ಟು ೮ ಜಾವೆಲಿನ ಪಟುಗಳು ಭಾಗವಹಿಸಿದ್ದ ಫೈನಲ್ ಸ್ಪರ್ಧೆಯಲ್ಲಿ ನೀರಜ್ ಚೋಪ್ರಾ ತಮ್ಮ ಮೂರನೇ ಪ್ರಯತ್ನದಲ್ಲಿ ಈ ಸಾಧನೆ ಮಾಡಿ ಗಮನ ಸೆಳೆದರು.

<><*<><>*><>

ಆಂಟಿಗುವಾದಲ್ಲಿ ಇಂದಿನಿಂದ ಪುರುಷರ ಐಸಿಸಿ ವಿಶ್ವಕಪ್ ಟಿ-೨೦ ಕ್ರಿಕೆಟ್ ಟೂರ್ನಿಯ ಸೂಪರ್-೮ರ ಸುತ್ತು ಆರಂಭವಾಗಲಿದೆ. ನಾರ್ತ್‌ಸೌಂಡ್‌ನಲ್ಲಿರುವ ಸರ್ ವಿವಿಯನ್ ರಿಚರ್ಡ್ಸ್ ಕ್ರೀಡಾಂಗಣದಲ್ಲಿ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ನಡೆಯಲಿರುವ ಸೂಪರ್-೮ರ ಹಂತದ ಮೊದಲ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಮತ್ತು ಅಮೆರಿಕ ತಂಡಗಳು ಮುಖಾಮುಖಿಯಾಗಲಿವೆ. ಲೀಗ್ ಹಂತದಲ್ಲಿ ನಾಲ್ಕು ಗುಂಪುಗಳಲ್ಲಿ ಒಟ್ಟು ೨೦ ತಂಡಗಳು ಸೆಣಸಿದ್ದು, ತಲಾ ಗುಂಪಿನ ಅಗ್ರ ಎರಡು ತಂಡಗಳು ಎಂಟರಘಟ್ಟಕ್ಕೆ ಅರ್ಹತೆ ಪಡೆದುಕೊಂಡಿವೆ. ಈ ತಂಡಗಳನ್ನು ಸೂಪರ್-೮ರ ಹಂತದಲ್ಲಿ ಗುಂಪು-೧ ಮತ್ತು ಗುಂಪು-೨ರಲ್ಲಿ ಸಮನಾಗಿ ೪ ತಂಡಗಳಂತೆ ವಿಭಜಿಸಲಾಗಿದೆ. ಗುಂಪು-೧ರಲ್ಲಿ ಭಾರತ, ಆಸ್ಟ್ರೇಲಿಯಾ, ಅಫ್ಘಾನಿಸ್ತಾನ ಮತ್ತು ಬಾಂಗ್ಲಾದೇಶ ತಂಡಗಳು ಸ್ಥಾನ ಪಡೆದಿದ್ದರೆ, ಗುಂಪು-೨ರಲ್ಲಿ ದಕ್ಷಿಣ ಆಫ್ರಿಕಾ ಮತ್ತು ಅಮೆರಿಕ ಅಲ್ಲದೆ ಇಂಗ್ಲೆಂಡ್ ಮತ್ತು ವೆಸ್ಟ್ ಇಂಡೀಸ್ ತಂಡಗಳು ಸ್ಥಾನ ಹೊಂದಿವೆ.  ಲೀಗ್‌ನಲ್ಲಿ ದಕ್ಷಿಣ ಆಫ್ರಿಕಾ ಆಫ್ರಿಕಾ 'ಡಿ' ಗುಂಪಿನ ಅಗ್ರಸ್ಥಾನಿಯಾಗಿ ಹಾಗೂ ಅಮೆರಿಕ 'ಎ' ಗುಂಪಿನ ಎರಡನೇ ತಂಡವಾಗಿ ಸೂಪರ್ ಎಂಟರ ಘಟ್ಟಕ್ಕೆ ಲಗ್ಗೆ ಹಾಕಿವೆ. ಏಡೆನ್ ಮರ್ಕರಂ ನಾಯಕತ್ವದಲ್ಲಿರುವ ದಕ್ಷಿಣ ಆಫ್ರಿಕಾ ತಂಡ ಈ ಬಾರಿ ಚೊಚ್ಚಲ ವಿಶ್ವಕಪ್ ಗೆಲ್ಲುವ ವಿಶ್ವಾಸ ಹೊಂದಿದೆ.  ಮತ್ತೊಂದೆಡೆ ಗುಂಪು ಹಂತದಲ್ಲಿ ಮಾಜಿ ಚಾಂಪಿಯನ್ ಪಾಕಿಸ್ತಾನ ತಂಡಕ್ಕೆ ಅಚ್ಚರಿಯ ಸೋಲುಣಿಸಿದ್ದ ಅಮೆರಿಕ ಆಟಗಾರರು ಸಾಂಘಿಕ ಪ್ರದರ್ಶನ ನೀಡುತ್ತಿದ್ದಾರೆ. ದಕ್ಷಿಣ ಅಫ್ರಿಕಾ ವಿರುದ್ಧವೂ ಉತ್ತಮ ಪ್ರದರ್ಶನ ನೀಡುವ ವಿಶ್ವಾಸ ಹೊಂದಿದ್ದಾರೆ.

<><*<><>*><>

ಬೆಂಗಳೂರಿನಲ್ಲಿಂದು ನಡೆಯಲಿರುವ ಮೂರು ಪಂದ್ಯಗಳ ಮಹಿಳಾ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ವನಿತೆಯರು ಸೆಣಸಲಿದ್ದಾರೆ. ಮಧ್ಯಾಹ್ನ ೧.೩೦ಕ್ಕೆ ಪಂದ್ಯ ಆರಂಭವಾಗಲಿದೆ.  ಬೆಂಗಳೂರಿನಲ್ಲಿಯೇ ನಡೆದ ಮೊದಲ ಪಂದ್ಯದಲ್ಲಿ ಭಾರತ ತಂಡದ ವನಿತೆಯರು ೧೪೩ ರನ್‌ಗಳ ಭಾರಿ ಅಂತರದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಜಯಗಳಿಸುವ ಮೂಲಕ ಮೂರು ಪಂದ್ಯಗಳ ಸರಣಿಯಲ್ಲಿ ೧-೦ ಮುನ್ನಡೆ ಸಾಧಿಸಿದ್ದಾರೆ. ಹರ್ಮನ್‌ಪ್ರೀತ್ ಕೌರ್ ನಾಯಕತ್ವದಲ್ಲಿರುವ ಭಾರತದ ಮಹಿಳೆಯರು ಇಂದಿನ ಪಂದ್ಯದಲ್ಲೂ ಗೆಲುವು ದಾಖಲಿಸುವ ಮೂಲಕ ಸರಣಿಯನ್ನು ತಮ್ಮದಾಗಿಸಿಕೊಳ್ಳುವ ವಿಶ್ವಾಸ ಹೊಂದಿದ್ದಾರೆ. ಮತ್ತೊಂದೆಡೆ, ಲಾರಾ ವಾಲ್ವರ್ಡ್‌ಟ್ ನೇತೃತ್ವದ ದಕ್ಷಿಣ ಆಫ್ರಿಕಾ ತಂಡ ಮೊದಲ ಪಂದ್ಯದಲ್ಲಿ ಬ್ಯಾಟಿಂಗ್‌ನಲ್ಲಿ ಭಾರಿ ವೈಫಲ್ಯ ಅನುಭವಿಸಿತ್ತು. ಬೌಲಿಂಗ್‌ನಲ್ಲೂ ಸಹ ಉತ್ತಮ ಪ್ರದರ್ಶನ ನೀಡಿರಲಿಲ್ಲ. ಆದರೆ, ಎರಡನೇ ಪಂದ್ಯದಲ್ಲಿ ಭಾರತದ ವಿರುದ್ಧ ಗೆದ್ದು ಸರಣಿ ಗೆಲ್ಲುವ ಆಸೆ ಜೀವಂತವಿರಿಸಿಕೊಳ್ಳಲು ಎದುರು ನೋಡುತ್ತಿದೆ. ಸರಣಿಯ ಮೂರನೇ ಹಾಗೂ ಅಂತಿಮ ಏಕದಿನ ಪಂದ್ಯ ಬೆಂಗಳೂರಿನಲ್ಲಿಯೇ ಇದೇ ೨೩ರಂದು ಭಾನುವಾರ ನಡೆಯಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>